ಆ) ಮಾನ್ಯ ಲೋಕಾಯುಕ್ತರು ಮಾಧ್ಯಮದವರಿಗೆ ಕೊಟ್ಟ ಮಾಹಿತಿ ತಪ್ಪಾಗಿದ್ದಲ್ಲಿ ಆ ಬಗ್ಗೆ ಯಾವ ಕ್ರಮ ಜರುಗಿಸಲಾಗುತ್ತದೆ? (ಅಂತಹ ಪ್ರಕರಣಗಳ ಪಟ್ಟಿಯನ್ನು ಒದಗಿಸುವುದು);

ಇ) ಭ್ರಷ್ಟಾಚಾರ ನಿಯಂತ್ರಣ ಕಾಯಿದೆ 1988ರ ಅನ್ವಯ ದಾಳಿ ಮಾಡುವ ಮೊದಲೇ ಲೋಕಾಯುಕ್ತ ಪೊಲೀಸರು ನ್ಯಾಯಾಧೀಶರ ಮುಂದೆ ಮಂಡಿಸುವ ಸೋರ್ಸ್ ರಿಪೋರ್ಟ್‌ನಲ್ಲಿ ತಪ್ಪು ಮಾಹಿತಿಗಳನ್ನು ನೀಡಿದ ಅಧಿಕಾರಿಯ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುತ್ತದೆ, ಈವರೆವಿಗೆ ಇಂತಹ ಎಷ್ಟು ಪ್ರಕರಣಗಳಲ್ಲಿ ಕ್ರಮ ತೆಗೆದುಕೊಳ್ಳಲಾಗಿದೆ? (ವಿವರ ನೀಡುವುದು);

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ದಾಳಿ ನಂತರ ತನಿಖಾಧಿಕಾರಿಗಳು ನೀಡುವ ವಿವರಗಳನ್ನು ಆಧರಿಸಿ ಅಪರ ಪೊಲೀಸ್ ಮಹಾ ನಿರ್ದೇಶಕರು ಸದರಿ ವಿವರಗಳನ್ನು ಗೌರವಾನ್ವಿತ ಲೋಕಾಯುಕ್ತರವರಿಗೆ ನೀಡುತ್ತಾರೆ. ಮಾಹಿತಿಯ ಸತ್ಯಾಂಶವನ್ನು ಆ ಹಂತದಲ್ಲಿ ಪರಿಶೀಲಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ಇಂತಹ ಸಂದರ್ಭ ಒದಗಿ ಬಂದಿರುವುದಿಲ್ಲ.

ಇ) ಸೋರ್ಸ್ ನೀಡಿದ ವ್ಯಕ್ತಿಯ ಹೆಸರನ್ನು ಬಹಿರಂಗಗೊಳಿಸುವುದಿಲ್ಲ. ಸೋರ್ಸ್ ರಿಪೋರ್ಟ್‌ನಲ್ಲಿ ಯಾವುದೇ ಅಧಿಕಾರಿಯು ಉದ್ದೇಶಪೂರ್ವಕವಾಗಿ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಕಂಡು ಬಂದಲ್ಲಿ ಅವರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು. ಈವರೆವಿಗೆ ಇಂತಹ ಪ್ರಕರಣಗಳು ಯಾವುದೂ ಇರುವುದಿಲ್ಲ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಪಾರ್ಕ್‌ಗಳ ಸ್ಥಾಪನೆ

149 (446) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಪಾರ್ಕ್‌ಗಳನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ;

ಆ) ಹಾಗಿದ್ದಲ್ಲಿ ಯಾವ್ಯಾವ ಸ್ಥಳಗಳನ್ನು ಗುರುತಿಸಲಾಗಿದೆ (ವಿವರಗಳನ್ನು ಒದಗಿಸುವುದು)?

ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) :

ಅ) ಹೌದು.

ಆ) **1] ಮಾಹಿತಿ ತಂತ್ರಜ್ಞಾನ ಪಾರ್ಕ್ :-**

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ನಗರದ ದೇರೇಬೈಲ್‌ನ ಸರ್ವೆ ನಂ 129-1ಎ ನಲ್ಲಿ ಕಿಯೋನಿಕ್ಸ್ ಸಂಸ್ಥೆಯು ಹೊಂದಿರುವ 3.25 ಎಕರೆ ಭೂಮಿಯಲ್ಲಿ ಐಟಿ ಪಾರ್ಕ್‌ನ್ನು ಕಿಯೋನಿಕ್ಸ್ ಹಾಗೂ ಖಾಸಗಿ ಸಹಭಾಗಿತ್ವದ ಮಾದರು (ಪಿಪಿಪಿ ಮಾಡೆಲ್)ಯಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಇದಕ್ಕೆ ಆಸಕ್ತ ಬಂಡವಾಳ ದಾರರಿಂದ ಅರ್ಜಿ ಆಹ್ವಾನಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ.

2] ಜೈವಿಕ ತಂತ್ರಜ್ಞಾನ ಪಾರ್ಕ್ :-

ಕಾಲೇಜ್ ಆಫ್ ಫಿಷರೀಸ್, ಮಂಗಳೂರು ಇಲ್ಲಿನ ಸುಮಾರು ಹದಿನೆಂಟು ಎಕರೆ ಪ್ರದೇಶದಲ್ಲಿ ಮರೀನ್ ಜೈವಿಕ ತಂತ್ರಜ್ಞಾನ ಉದ್ಯಾನವನ್ನು ಸುಮಾರು ರೂ. 30 ಕೋಟಿ ವೆಚ್ಚದಲ್ಲಿ ಖಾಸಗೀ ಸಹಭಾಗಿತ್ವದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ. ತತ್ಸಂಬಂಧವಾಗಿ ಯೋಜನಾ ವ್ಯವಸ್ಥಾಪ ಕರನ್ನು ಆಯ್ಕೆಗೊಳಿಸಲಾಗಿದ್ದು, ಯೋಜನೆಯ ರೂಪುರೇಷೆಗಳನ್ನು, ಬಂಡ ವಾಳದಾರರನ್ನು ಗುರುತಿಸುವ ಪ್ರಕ್ರಿಯೆಗಳನ್ನು ಆವರಿಗೆ ವಹಿಸಲಾಗಿರುತ್ತದೆ.

ರಾಜ್ಯದ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗೆ ಮೇಲ್ದರ್ಜೆಗೇರಿಸುವ ಬಗ್ಗೆ

151 (448) ಶ್ರೀ ಖಾದರ್ ಯು.ಟಿ (ಮಂಗಳೂರು) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ಪೈಕಿ ಯಾವ್ಯಾವ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿಸ ಲಾಗುವುದು;